# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ–164//2021–22

ದಿನಾಂಕ: 02–02–2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ದಿನಾಂಕ: 27–01–2022 ಗುರುವಾರ ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಡಿಸಂಬರ್ ತಿಂಗಳ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಪೂರ್ವಾಹ್ನ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 3 | ಶ್ರೀ ಕೃಷ್ಣಮೂರ್ತಿ.ಟಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್–164, ವಿದ್ಯಾಪೀಠ |
| 4 | ಡಾ॥ ಸುರ್ಜಿತ್ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 5 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್–164, ವಿದ್ಯಾಪೀಠ |
| 6 | ಎಂ. ಸುರೇಶ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 7 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 8 | ಶ್ರೀ ಕುಮಾರ್ | ಸಾರ್ವಜನಿಕರು |
| 9 | ಶ್ರೀ ರೆಡ್ಡಿ | ಸಾರ್ವಜನಿಕರು |
| 10 | ಶ್ರೀ ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 11 | ಶ್ರೀ ಮಹೇಶ್ .ಬಿ | ಮಾರ್ಷಲ್ |
| 12 | ಶ್ರೀ ಯತಿರಾಜ್ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 13 | ಶ್ರೀ ತಿರುಮಲಯ್ಯ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಡಿಸಂಬರ್ ತಿಂಗಳ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ಘನ ತ್ಯಾಜ್ಯ ನಿರ್ವಹಣಾ ವಿಭಾಗ ವ್ಯಾಪ್ತಿಯಿಂದ ಸಹಾಯಕ ಕಾರ್ಯಪಾಲಕ ಅಭಿಯಂತರರು ಕಾರಣಾಂತರದಿಂದ ಸಭೆಗೆ ಗೈರು ಹಾಜರಾಗಿದ್ದು, ಸದರಿಯವರಿಗೆ ಮುಂದಿನ ಸಭೆಗೆ ಹಾಜರಾಗಲು ತಿಳಿಸಿ ಪತ್ರ ಬರೆಯಲು ತೀರ್ಮಾನಿಸಲಾಯಿತು. ನಂತರ ಸಭೆಯಲ್ಲಿ ಹಾಜರಿದ್ದ ಘನ ತ್ಯಾಜ್ಯ ನಿರ್ವಹಣೆ ವಿಭಾಗದ ಮೇಸ್ತ್ರಿಗಳಿಗೆ ಮನೆಗಳಿಂದ ಸಂಗ್ರಹಿಸುವ ಒಣ & ಹಸಿ ತ್ಯಾಜ್ಯವನ್ನು ಸಮರ್ಪಕವಾಗಿ ಪ್ರತ್ಯೇಕಿಸಿ ನೀಡುವ ಬಗ್ಗೆ ಸಾರ್ವಜನಿಕರಿ ಅರಿವು ಮೂಡಿಸಲು ಕ್ರಮವಹಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು ರವರಿಗೆ ನೋಟೀಸ್ ನೀಡಿ ಮುಂದಿನ ವಾರ್ಡ್ ಸಮಿತಿ ಸಭೆಗೆ ಹಾಜರಾಗಿ ಸ್ಪಷ್ಟೀಕರಣ ನೀಡಲು ನೋಡಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿರುತ್ತಾರೆ.

ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಸುನಿಲ್ ರವರು ಸಭೆಗೆ ವರದಿ ನಿಡುತ್ತಾ ಎಪ್ರಿಲ್ 2020 ರಿಂದ ಈವರೆವಿಗೂ ಘನತ್ಯಾಜ್ಯ ನಿರ್ವಹಣೆ ಕೆಲಸದ ಬಿಲ್ಲುಗಳು ಪಾವತಿಯಾಗಿರುವ ಬಗ್ಗೆ ತಿಳಿಸಿರುತ್ತಾರೆ. ಪಾವತಿಯಾಗಿರುವ ವರದಿಯನ್ನು ನೀಡಲು ಅಧ್ಯಕ್ಷರು ಸದರಿಯವರಿಗೆ ಸೂಚಿಸಿರುತ್ತಾರೆ. ಈ ಮಾಹೆಯ 9ನೇ ದಿನಾಂಕದಿಂದ ಕೋವಿಡ್ ಕಾರಣದಿಂದಾಗಿ ಪೌರಕಾರ್ಮಿಕರ ಬಯೋಮೆಟ್ರಿಕ್ ಹಾಜರಾತಿಯನ್ನು ನಿಲ್ಲಿಸಿ ಭೌತಿಕವಾಗಿ ಹಾಜರಾತಿಯನ್ನು ಹಾಕಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

2. ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) ರವರು ಸಭೆಯಲ್ಲಿ ಹಾಜರಿದ್ದು, ಆರೋಗ್ಯ ಕೇಂದ್ರದಲ್ಲಿ ಪ್ರತಿದಿನವೂ ಸರಿಸುಮಾರು 100 ಜನರಿಗೆ ಬೂಸ್ಟರ್ ಲಸಿಕೆಯನ್ನು ಹಾಕಲಾಗುತ್ತಿದ್ದು, 1ನೇ ಮತ್ತು 2ನೇ ಡೋಸ್ ಪ್ರತಿದಿನವೂ ಸರಿಸುಮಾರು 200 ಜನರಿಗೆ ಹಾಕಲಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ. ಡಿಸಂಬರ್ ಮಾಹೆಯಲ್ಲಿ 6400 ಕೋವಿಡ್ ಪರೀಕ್ಷೆಯನ್ನು ನಡೆಸಲಾಗಿದ್ದು, ಅದರಲ್ಲಿ 700ಕ್ಕೂ ಹೆಚ್ಚು ಕೋವಿಡ್ ಪಾಸಿಟಿವ್ ಕೇಸ್‌ಗಳು ವರದಿಯಾಗಿರುತ್ತದೆ ಎಂದು ತಿಳಿಸಿರುತ್ತಾರೆ ಹಾಗೂ ಯಾವುದೇ ಓಮಿಕ್ರೋನ್ ಪ್ರಕರಣಗಳು ವರದಿಯಾಗಿರುವುದಿಲ್ಲ ಎಂದು ಕೋವಿಡ್ ಸೋಂಕಿತರಲ್ಲಿ ಒಬ್ಬರು ಮರಣ ಹೊಂದಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ವೈದ್ಯಾಧಿಕಾರಿಗಳಿಗೆ ತಿಳಿಸಿರುತ್ತಾರೆ. ಚಿಕ್ಕಮಕ್ಕಳ ಲಸಿಕಾಕರಣವನ್ನು ವಾರದಲ್ಲಿ ಪ್ರತಿ ಮಂಗಳವಾರ ಮತ್ತು ಗುರುವಾರದಂದು ನೀಡಲಾಗುತ್ತಿರುತ್ತದೆ ಹಾಗೂ 15 ರಿಂದ 18 ವರ್ಷದ ಪ್ರಾಯದವರಿಗೆ ಕೋವಿಡ್ ಲಸಿಕೆಯನ್ನು ಪ್ರತಿ ಶನಿವಾರ ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.

3. ಸಭೆಗೆ ಹಾಜರಿದ್ದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಯಾವ ಅಧಿಕಾರಿ ಹಾಜರಿರುವುದಿಲ್ಲ ಈ ಬಗ್ಗೆ ಸದರಿಯವರಿಗೆ ಮುಂದಿನ ಸಭೆಗೆ ಹಾಜರಿರಲು ಸೂಚಿಸುವಂತೆ ಅಧ್ಯಕ್ಷರು ತಿಳಿಸಿರುತ್ತಾರೆ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆಯ ದುರಸ್ಥಿ ಮಾಡಿ ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ತಿಳಿಸಲು ಅಧ್ಯಕ್ಷರು ತಿಳಿಸಿರುತ್ತಾರೆ.

4. ಸಭೆಯಲ್ಲಿ ಹಾಜರಿದ್ದ ಕಂದಾಯ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಮತದಾರರ ನೋಂದಣಿ ಅಭಿಯಾನದ ಹಮ್ಮಿಕೊಂಡಿದ್ದು, ಅಭಿಯಾನದಲ್ಲಿ ಹೊಸದಾಗಿ ಸೇರ್ಪಡೆಗೊಳಿಸಲು ಅರ್ಜಿಗಳನ್ನು ಸ್ವೀಕರಿಸಲಾಗುತ್ತದೆ ಹಾಗೂ ಹಾಲಿ ಇರುವ ಮತದಾರರ ವರ್ಗಾವಣೆ ಮತ್ತು ಮರಣ ಹೊಂದಿರುವ ಮತದಾರರನ್ನು ಪಟ್ಟಿಯಿಂದ ತೆಗೆಯುವ ಕಾರ್ಯ ಮಾಡಲಾಗುತ್ತದೆ ಎಂದು ಸಭೆಯಲ್ಲಿ ಕಂದಾಯ ಅಧಿಕಾರಿಗಳು ವರದಿ ನೀಡಿರುತ್ತಾರೆ.
ಮುಂದುವರೆದು ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಈವರೆವಿಗೂ ಕಂದಾಯ ವಸೂಲಿ ಆಗಿರುವ ವರದಿಯನ್ನು ನೀಡಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ತಿಳಿಸಿರುತ್ತಾರೆ.

5. ಸಭೆಯಲ್ಲಿ ಹಾಜರಿದ್ದ ಶ್ರೀ ಕುಮಾರ್, ಸಾರ್ವಜನಿಕರು ರವರು ಉದ್ಯಾನವನಗಳ ನಿರ್ವಹಣೆ ಬಗ್ಗೆ ಹಾಗೂ ಬೀದಿ ದೀಪಗಳ ನಿರ್ವಹಣೆ ಬಗ್ಗೆ ಸಂಬಂಧಿಸಿದವರಿಗೆ ತಿಳಿಸಿ ಗಮನ ವಹಿಸಲು ಸಭೆಯಲ್ಲಿ ನೊಡಲ್ ಅಧಿಕಾರಿಗಳಿಗೆ ಸಲಹೆಗಳನ್ನು ನೀಡಿರುತ್ತಾರೆ.

6. ಬೆಂಗಳೂರಿನಲ್ಲಿ ಓಮಿಕ್ರೋನ್ ಹೊಸ ವೈರಸ್ ಪತ್ತೆಯಾಗಿರುವ ಹಿನ್ನೆಲಯಲ್ಲಿ ವಾರ್ಡ್-164ರ ವ್ಯಾಪ್ತಿಯಲ್ಲಿ ಮಾಸ್ಕ್ ಧರಿಸದೆ ಇರುವ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿ ದಂಡವನ್ನು ವಿಧಿಸಬೇಕೆಂದು ನೊಡಲ್ ಅಧಿಕಾರಿಗಳು ಮಾರ್ಷಲ್‌ಗಳಿಗೆ ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ರಾತ್ರಿ ಗಸ್ತು ಮಾಡಲು, ರಸ್ತೆ ಬದಿಯಲ್ಲಿ ತಳ್ಳುವ ಗಾಡಿಗಳಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ತಡೆಗಟ್ಟಲು ಸಭೆಯಲ್ಲಿ ಸೂಚಿಸಲಾಯಿತು.

7. ವಾರ್ಡ್ ವ್ಯಾಪ್ತಿಯ ಕಾಮಗಾರಿಗಳ ಬಗ್ಗೆ ಉಲ್ಲೇಖಿಸುತ್ತಾ ವಾರ್ಡ್ 164 ರಲ್ಲಿನ ರಸ್ತೆ ಗುಂಡಿಗಳ ಬಗ್ಗೆ ಶ್ರೀ ಕುಮಾರ್, ಸಾರ್ವಜನಿಕರು ಮಾತನಾಡಿ ಶೀಘ್ರದಲ್ಲಿ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಿ ನಿರ್ವಹಿಸಲು ತಿಳಿಸಿರುತ್ತಾರೆ. ಸದರಿ ವಿಷಯದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಹೊಸದಾಗಿ ಗುರ್ತಿಸಲಾದ ರಸ್ತೆ ಗುಂಡಿಗಳನ್ನು ಜಲಮಂಡಳಿ ಹಾಗೂ ಬೆಸ್ಕಾಂ ಹಾಗೂ ಇನ್ನಿತರ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳಿಂದ ಪರಿವೀಕ್ಷಣೆ ಮಾಡಿದ ನಂತರ ರಸ್ತೆ ಗುಂಡಿಗಳನ್ನು ಮುಚ್ಚಲು ಅಗತ್ಯ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿರುತ್ತಾರೆ. ಈ ಬಗ್ಗೆ ವಾರ್ಡ್ ಅಭಿಯಂತರರು ರಸ್ತೆಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಕೈಗೊಳ್ಳಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಶೇ 50% ರಷ್ಟು ರಸ್ತೆಗುಂಡಿಗಳನ್ನು ಮುಚ್ಚಿರುತ್ತಾರೆ ಹಾಗೂ ವಾರ್ಡ್‌ನ ನಿರ್ವಹಣೆಗಾಗಿ ಕಾಮಗಾರಿ ಇಲಾಖೆಗೆ ನೀಡಲಾಗುತ್ತಿರುವ ರೂ: 60.00 ಲಕ್ಷಗಳ ಅನುದಾನದಲ್ಲಿ ಕೈಗೊಳ್ಳಬೇಕಾದ ಚರಂಡಿಗಳ ನಿರ್ವಹಣೆ, ರಸ್ತೆಗುಂಡಿಗಳ ನಿರ್ವಹಣೆ, ಬೋರ್‌ವೆಲ್‌ಗಳ ನಿರ್ವಹಣೆ, ಕಟ್ಟಡಗಳ ನಿರ್ವಹಣೆಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಕಾರ್ಪೋರೇಟರ್ ರವರೊಂದಿಗೆ ಚರ್ಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ, ವಿದ್ಯಾಪೀಠ ಸರ್ಕಲ್, ಬೆಂಗಳೂರು.**

---

ಸಂಖ್ಯೆ: ಸ.ಅ/ವಿ.ಪೀ/ವಾ-164/2021-22.

ದಿನಾಂಕ: 24-01-2022

**ಸಭೆಯ ಸೂಚನಾ ಪತ್ರ**

ವಿಷಯ: ಜನವರಿ-2022ರ ತಿಂಗಳ ವಾರ್ಡ್ ಸಮಿತಿ ಸಭೆ.

ಉಲ್ಲೇಖ: ಮಾನ್ಯ ಆಯುಕ್ತರ ಆದೇಶ ಸಂಖ್ಯೆ: ಬಿ12(58)ಪಿಆರ್/35/2020-21, ದಿನಾಂಕ: 21-09-2020

********

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬಸವನಗುಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್-164ರ ಸಭೆಯನ್ನು ದಿನಾಂಕ:27-01-2022 ,ಗುರುವಾರ ಬೆಳಿಗ್ಗೆ 11.00 ಗಂಟೆಗೆ ಸರಿಯಾಗಿ ಜನವರಿ-2022ರ ತಿಂಗಳ ವಾರ್ಡ್ ಸಮಿತಿ ಸಭೆಯನ್ನು ವಾರ್ಡ ಸಂಖ್ಯೆ 164, ವಿದ್ಯಾಪೀಠ, ವಿದ್ಯಾಪೀಠ ವೃತ್ತ, ವಾರ್ಡ್ ಕಛೇರಿ ಇಲ್ಲಿ ನಡೆಸಲು ತೀರ್ಮಾನಿಸಲಾಗಿದ್ದು, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್ 164ಕ್ಕೆ ಸಂಬಂಧಿಸಿದಂತೆ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳು, ಸಾರ್ವಜನಿಕರಿಂದ ಬಂದಂತಹ ಮನವಿಗಳು, ವಾರ್ಡ್ ವ್ಯಾಪ್ತಿಯಲ್ಲಿ ಕೈಗೊಳ್ಳಬೇಕಾಗಿರುವ ಕೆಲಸ ಕಾರ್ಯಗಳು ಹಾಗೂ ಘನತ್ಯಾಜ್ಯ ನಿರ್ವಹಣೆ, ಕೋವಿಡ್-19ರ ನಿಯಂತ್ರಣದ ಬಗ್ಗೆ ಮತ್ತು ಇತರೆ ವಿಷಯಗಳ ಬಗ್ಗೆ ಚರ್ಚಿಸಲು ಸಾಮಾನ್ಯ ಸಭೆಯನ್ನು ಕರೆಯಲಾಗಿರುತ್ತದೆ. ಈ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಗೂ ಸದಸ್ಯರು ತಪ್ಪದೇ ಈ ಸಭೆಗೆ ಹಾಜರಾಗಿ ಸಭೆಯ ಕಾರ್ಯಕಲಾಪಗಳನ್ನು ನಡೆಸಿಕೊಡಬೇಕೆಂದು ಈ ಮೂಲಕ ತಿಳಿಯಪಡಿಸಿದೆ.

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು (ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮಾನ್ಯ ಅಪರ ನಿರ್ದೇಶಕರು (ನಗರ ಯೋಜನೆ) ಹಾಗೂ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು(ಗಿರಿನಗರ) ಉಪವಿಭಾಗ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೃ.ನೀ.ಗಾ) ವಿಭಾಗ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ಬಸವನಗುಡಿ ವಿಭಾಗ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
11. ಸಹಾಯಕ ಕಂದಾಯ ಅಧಿಕಾರಿಗಳು (ಬಸವನಗುಡಿ) ಉಪವಿಭಾಗ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
12. ಆರೋಗ್ಯ ವೈದ್ಯಾಧಿಕಾರಿಗಳು (ಬಸವನಗುಡಿ) ವಲಯ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
13. ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಸಿ.ಟಿ ಬೆಡ್ ರವರ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
14. ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
16. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
17. ಪೋಲೀಸ್ ಅಧಿಕಾರಿಗಳು, ಸಿ.ಕೆ ಅಚ್ಚುಕಟ್ಟು / ಹನುಮಂತನಗರ ಪೋಲೀಸ್ ಠಾಣೆ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
18. ಕೋವಿಡ್-19 ಮಾರ್ಷಲ್‌ರವರು ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ/ ಕಛೇರಿ ಕಡತಕ್ಕೆ.